# ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ

**ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ಸರ್ಕಾರ**

**'ವಿಜ್ಞಾನ ಭವನ' 24/2, 21ನೇ ಮುಖ್ಯ ರಸ್ತೆ, ಬನಶಂಕರಿ, 2ನೇ ಹಂತ, ಬೆಂಗಳೂರು**

**ಜಾಲತಾಣ : www.kstacademy.org**

## ವಾರ್ಷಿಕ ವರದಿ 2015-'16

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು (ಕವಿತಂಅ) ಖ್ಯಾತ ಬಾಹ್ಯಾಕಾಶ ವಿಜ್ಞಾನಿ ಪ್ರೊ. ಯು. ಆರ್. ರಾವ್, ನಿವೃತ್ತ ಅಧ್ಯಕ್ಷರು, ಇಸ್ರೋ/ಕಾರ್ಯದರ್ಶಿ, ಬಾಹ್ಯಾಕಾಶ ಇಲಾಖೆ, ಭಾರತ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಅಕಾಡೆಮಿಯು ಮೂಲ ವಿಜ್ಞಾನವನ್ನು ವಿವಿಧ ಶೈಕ್ಷಣಿಕ ಹಂತಗಳಲ್ಲಿ ಸದೃಢಗೊಳಿಸಲು ಹಾಗೂ ವೈಜ್ಞಾನಿಕ ಅರಿವು ಮೂಡಿಸಲು ಮತ್ತು ಜನಸಾಮಾನ್ಯರಲ್ಲಿ ವಿಜ್ಞಾನವನ್ನು ಜನಪ್ರಿಯಗೊಳಿಸಲು ಪೂರಕವಾಗುವ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಿಕೊಂಡು ಬರುತ್ತಿದೆ. 2015-'16ನೇ ಸಾಲಿನಲ್ಲಿ ಕೆಳಕಂಡ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ಬಹಳ ಯಶಸ್ವಿಯಾಗಿ ಆಯೋಜಿಸಲಾಗಿದೆ:

### 1. ವಿಜ್ಞಾನ ಲೋಕ ಪ್ರಕಟಣೆ

ಅಕಾಡೆಮಿಯು "ವಿಜ್ಞಾನ ಲೋಕ" ಸಂಚಿಕೆಯನ್ನು 2007ರಿಂದ ನಿರಂತರವಾಗಿ ಪ್ರಕಟಿಸುತ್ತಿದೆ. 2015-'16ನೇ ಸಾಲಿನಲ್ಲಿ ಸದರಿ ದ್ವೈಮಾಸಿಕದ 6 ಸಂಚಿಕೆಗಳನ್ನು 2015ರ ಮೇ, ಜುಲೈ, ಸೆಪ್ಟೆಂಬರ್ & ನವೆಂಬರ್ ಹಾಗೂ 2016ರ ಜನವರಿ & ಮಾರ್ಚ್ ಮಾಹೆಗಳಲ್ಲಿ ಪ್ರಕಟಿಸಲಾಗಿದೆ. ಪ್ರತಿ ಸಂಚಿಕೆಯ ತಲಾ 2000 ಪ್ರತಿಗಳನ್ನು ಮುದ್ರಿಸಿ, ರಾಜ್ಯದ ವಿವಿಧ ವಿಜ್ಞಾನ ಪದವಿ ಪೂರ್ವ ಮತ್ತು ವಿಜ್ಞಾನ ಪದವಿ ಕಾಲೇಜುಗಳಿಗೆ, ವಿಜ್ಞಾನ ಕೇಂದ್ರಗಳಿಗೆ, ಗ್ರಂಥಾಲಯಗಳಿಗೆ ಹಾಗೂ ಇನ್ನಿತರೆ ಸಂಸ್ಥೆಗಳಿಗೆ ಉಚಿತವಾಗಿ ಕಳುಹಿಸಿ ಕೊಡಲಾಗಿದೆ.



## 2. ವಿಜ್ಞಾನ ಪದವಿ ವಿದ್ಯಾರ್ಥಿಗಳಿಗೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಶಿಷ್ಯವೇತನ

### 2.1 ಅಕಾಡೆಮಿ ಶಿಷ್ಯವೇತನ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಶಿಷ್ಯವೇತನವನ್ನು ಪದವಿ ಪೂರ್ವ ಹಂತದಲ್ಲಿ ಶೇಕಡ 70ಕ್ಕಿಂತ ಹೆಚ್ಚು ಅಂಕವನ್ನು ಪಡೆದು ಮೂಲ ವಿಜ್ಞಾನ ವ್ಯಾಸಂಗಕ್ಕೆ ಸೇರ್ಪಡೆಗೊಳ್ಳುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ (ಪ್ರತಿ ವಿಶ್ವವಿದ್ಯಾಲಯಕ್ಕೆ 20 ಶಿಷ್ಯವೇತನಗಳಂತೆ) ನೀಡಲಾಗುತ್ತಿದೆ. ಪ್ರಥಮ ಮತ್ತು ದ್ವಿತೀಯ ವರ್ಷದ ಪದವಿ ಪರೀಕ್ಷೆಯಲ್ಲಿ ಶೇಕಡ 60ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಶಿಷ್ಯವೇತನವನ್ನು ಮುಂದುವರೆಸಿಕೊಂಡು ಹೋಗಲಾಗುತ್ತಿದೆ. ಮಾಹೆಯಾನ ರೂ. 1000/- ಗಳಂತೆ ಒಟ್ಟು 10 ತಿಂಗಳ ಅವಧಿಗೆ ರೂ. 10,000/- ಗಳಂತೆ ಶಿಷ್ಯವೇತನವನ್ನು ಬೆಂಗಳೂರು ವಿಶ್ವವಿದ್ಯಾಲಯ; ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ; ಮಂಗಳೂರು ವಿಶ್ವವಿದ್ಯಾಲಯ; ಮೈಸೂರು ವಿಶ್ವವಿದ್ಯಾಲಯ; ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರ್ಗಿ; ಶ್ರೀ ವಿಜಯನಗರ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ; ತುಮಕೂರು ವಿಶ್ವವಿದ್ಯಾಲಯ; ದಾವಣಗೆರೆ ವಿಶ್ವವಿದ್ಯಾಲಯ; ಕರ್ನಾಟಕ ವಿಶ್ವವಿದ್ಯಾಲಯ, ದಾರವಾಡ; ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ; ಕರ್ನಾಟಕ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ; ಜೈನ್ ವಿಶ್ವವಿದ್ಯಾಲಯ, ಬೆಂಗಳೂರು; ಮಣಿಪಾಲ್ ವಿಶ್ವವಿದ್ಯಾಲಯ, ಮಣಿಪಾಲ್ ಹಾಗೂ ಕ್ರೈಸ್ಟ್ ವಿಶ್ವವಿದ್ಯಾಲಯ, ಬೆಂಗಳೂರು ಇವುಗಳ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಒಟ್ಟು 559 ವಿಜ್ಞಾನ ಪದವಿ ವಿದ್ಯಾರ್ಥಿಗಳಿಗೆ ನೀಡಲಾಗಿದೆ (ಪ್ರಥಮ ವರ್ಷ- 230; ದ್ವಿತೀಯ ವರ್ಷ – 189 & ತೃತೀಯ ವರ್ಷ – 140).

### 2.2 ವಿಶೇಷ ಅಭಿವೃದ್ಧಿ ಯೋಜನೆಯಡಿ (SDP) ಶಿಷ್ಯವೇತನ

ಪ್ರಾದೇಶಿಕ ಅಸಮತೋಲನಕ್ಕೆ ಸಂಬಂಧಿಸಿದ ಡಾ. ಡಿ. ಎಂ. ನಂಜುಂಡಪ್ಪ ಸಮಿತಿಯು ಗುರುತಿಸಿರುವ ಹಿಂದುಳಿದ ತಾಲ್ಲೂಕುಗಳಲ್ಲಿ ವಿಜ್ಞಾನ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಲು ಶಿಷ್ಯವೇತನವನ್ನು ಮಾಹೆಯಾನ ರೂ. 1000/- ರಂತೆ (10 ತಿಂಗಳವರೆಗೆ ರೂ. 10,000/- ಪ್ರತಿ ವಿದ್ಯಾರ್ಥಿಗೆ) ಕಲಬುರ್ಗಿ (187 ಶಿಷ್ಯವೇತನಗಳು); ಬೆಳಗಾವಿ (350 ಶಿಷ್ಯವೇತನಗಳು); ಬೆಂಗಳೂರು (100 ಶಿಷ್ಯವೇತನಗಳು) ಹಾಗೂ ಮೈಸೂರು (151 ಶಿಷ್ಯವೇತನಗಳು) ಜಿಲ್ಲೆಗಳ ಒಟ್ಟು 788 ವಿದ್ಯಾರ್ಥಿಗಳಿಗೆ ನೀಡಲಾಗಿದೆ.



ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅಕಾಡೆಮಿ ವಿಶೇಷ ಅಭಿವೃದ್ಧಿ ಯೋಜನೆಯ ಶಿಷ್ಯವೇತನ ವಿತರಣೆ

**೩. ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳಿಗೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಶಿಷ್ಯವೇತನ**

ಸ್ನಾತಕೋತ್ತರ ಶಿಷ್ಯವೇತನವನ್ನು ಪ್ರತಿಭಾವಂತ ವಿದ್ಯಾರ್ಥಿಗಳು ಮೂಲ ವಿಜ್ಞಾನ ವಿಷಯದಲ್ಲಿ ಪದವಿಯ ನಂತರ ವ್ಯಾಸಂಗವನ್ನು ಮುಂದುವರೆಸಲು ಉತ್ತೇಜಿಸಲು ನೀಡಲಾಗುತ್ತಿದೆ. ವಿಜ್ಞಾನ ವಿದ್ಯಾರ್ಥಿಗಳಿಗೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಶಿಷ್ಯವೇತನವನ್ನು ಮಾಹೆಯಾನ ರೂ. ೧೫೦೦/- ಗಳಂತೆ (೧೦ ತಿಂಗಳವರೆಗೆ ರೂ. ೧೫,೦೦೦/-) ಒಂದು ವಿಶ್ವವಿದ್ಯಾನಿಲಯಕ್ಕೆ ೧೦ ಶಿಷ್ಯವೇತನವನ್ನು ಪ್ರತಿ ಮೂಲ ವಿಜ್ಞಾನ ವಿಭಾಗಕ್ಕೆ ೨ ರಂತೆ ಸ್ನಾತಕೋತ್ತರ ಪದವಿಯ ಎರಡು ವರ್ಷಗಳ ಅವಧಿಯವರೆಗೆ ನೀಡಲಾಗುತ್ತಿದೆ. ಬೆಂಗಳೂರು ವಿಶ್ವವಿದ್ಯಾಲಯ (೧೬ ಶಿಷ್ಯವೇತನಗಳು); ಕ್ರೈಸ್ಟ್ ವಿಶ್ವವಿದ್ಯಾಲಯ (೧೧ ಶಿಷ್ಯವೇತನಗಳು); ದಾವಣಗೆರೆ ವಿಶ್ವವಿದ್ಯಾಲಯ (೧೪ ಶಿಷ್ಯವೇತನಗಳು); ಗುಲ್ಬರ್ಗಾ ವಿಶ್ವವಿದ್ಯಾಲಯ (೧೪ ಶಿಷ್ಯವೇತನಗಳು); ಕರ್ನಾಟಕ ವಿಶ್ವವಿದ್ಯಾಲಯ (೧೮ ಶಿಷ್ಯವೇತನಗಳು); ಮೈಸೂರು ವಿಶ್ವವಿದ್ಯಾಲಯ (೨೦ ಶಿಷ್ಯವೇತನಗಳು); ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ (೩ ಶಿಷ್ಯವೇತನಗಳು); ಕುವೆಂಪು ವಿಶ್ವವಿದ್ಯಾಲಯ (೨೦ ಶಿಷ್ಯವೇತನಗಳು); ಮಂಗಳೂರು ವಿಶ್ವವಿದ್ಯಾಲಯ (೧೯ ಶಿಷ್ಯವೇತನಗಳು); ಮಣಿಪಾಲ್ ವಿಶ್ವವಿದ್ಯಾಲಯ (೪ ಶಿಷ್ಯವೇತನಗಳು); ತುಮಕೂರು ವಿಶ್ವವಿದ್ಯಾಲಯ (೮ ಶಿಷ್ಯವೇತನಗಳು); ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ (೭ ಶಿಷ್ಯವೇತನಗಳು); ಜೈನ್ ವಿಶ್ವವಿದ್ಯಾಲಯ (೪ ಶಿಷ್ಯವೇತನಗಳು) ಮತ್ತು ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಗಳ (೯ ಶಿಷ್ಯವೇತನಗಳು) ಒಟ್ಟು ೧೬೭ ಸ್ನಾತಕೋತ್ತರ ವಿದ್ಯಾರ್ಥಿಗಳು ಶಿಷ್ಯವೇತನವನ್ನು ಪಡೆದಿದ್ದಾರೆ.

**೪. ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮ ಮತ್ತು ಕಾರ್ಯಾಗಾರಗಳು**

ಆಧುನಿಕ ವೈಜ್ಞಾನಿಕ ಸಂಶೋಧನೆಯ ಬಗ್ಗೆ ಸ್ನಾತಕೋತ್ತರ ವಿದ್ಯಾರ್ಥಿಗಳು ತಮ್ಮ ಜ್ಞಾನದ ಪರಿಧಿಯನ್ನು ವಿಸ್ತರಿಸಿಕೊಳ್ಳಲು ಹಾಗೂ ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ತಮ್ಮ ವೃತ್ತಿ ಜೀವನವನ್ನು ಕಂಡುಕೊಳ್ಳಲು ಉತ್ತೇಜಿಸಲು ವಿಜ್ಞಾನ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮಗಳನ್ನು ಮೈಸೂರು ವಿಶ್ವವಿದ್ಯಾಲಯ (ಭೌತ ವಿಜ್ಞಾನ); ಮಂಗಳೂರು ವಿಶ್ವವಿದ್ಯಾಲಯ (ರಸಾಯನ ವಿಜ್ಞಾನ); ಗುಲ್ಬರ್ಗಾ ವಿಶ್ವವಿದ್ಯಾಲಯ (ಗಣಿತ ವಿಜ್ಞಾನ); ಕರ್ನಾಟಕ ವಿಶ್ವವಿದ್ಯಾನಿಲಯ (ಸಸ್ಯ ವಿಜ್ಞಾನ) ಮತ್ತು ಕೆ. ಎಸ್. ಹೆಗಡೆ ಅಕಾಡೆಮಿ, ಮಂಗಳೂರು (ಕ್ಲಿನಿಕಲ್ ರಿಸರ್ಚ್) ಇವುಗಳಲ್ಲಿ ಯಶಸ್ವಿಯಾಗಿ ನಡೆಸಲಾಯಿತು.

ಅಲ್ಲದೇ, ವಿಜ್ಞಾನ ವಿಶೇಷ ಕಾರ್ಯಾಗಾರಗಳನ್ನು ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು (ರಸಾಯನ ವಿಜ್ಞಾನ); ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ (ಗಣಿತ ವಿಜ್ಞಾನ); ಮೀನುಗಾರಿಕಾ ಮಹಾವಿದ್ಯಾನಿಲಯ, ಮಂಗಳೂರು (ಮೀನು ಸಂಸ್ಕರಣೆ); ಕ್ರೈಸ್ಟ್ ವಿಶ್ವವಿದ್ಯಾನಿಲಯ, ಬೆಂಗಳೂರು (ರಸಾಯನ ವಿಜ್ಞಾನ); ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯ, ಬಳ್ಳಾರಿ (ಔದ್ಯಮಿಕ ರಸಾಯನ ವಿಜ್ಞಾನ); ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ (ಭೌತ ವಿಜ್ಞಾನ) ಹಾಗೂ ಜೈನ್ ವಿಶ್ವವಿದ್ಯಾಲಯ, ಬೆಂಗಳೂರು (ಜೈವಿಕ ತಂತ್ರಜ್ಞಾನ) ಇವುಗಳಲ್ಲಿ ಯಶಸ್ವಿಯಾಗಿ ನಡೆಸಲಾಯಿತು. ಕಾರ್ಯಕ್ರಮದ ಕೊನೆಯಲ್ಲಿ ಉಪನ್ಯಾಸಗಳಿಗೆ ಅನುಗುಣವಾಗಿ ರಸಪ್ರಶ್ನೆ ಸ್ಪರ್ಧೆಯನ್ನು ಆಯೋಜಿಸಲಾಯಿತು. ಪ್ರಶ್ನೆ ಪತ್ರಿಕೆಯು ೬೦ ಬಹು ಆಯ್ಕೆ ಪ್ರಶ್ನೆಗಳನ್ನು ಒಳಗೊಂಡಿದ್ದು, ತಪ್ಪು ಉತ್ತರಗಳಿಗೆ ಋಣಾತ್ಮಕ ಅಂಕಗಳಿರಲಿಲ್ಲ. ರಸ ಪ್ರಶ್ನೆಯಲ್ಲಿ ಅತಿ ಹೆಚ್ಚು ಅಂಕಗಳನ್ನು ಗಳಿಸಿ ಮೊದಲ ೩ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಕ್ರಮವಾಗಿ ರೂ. ೧೦,೦೦೦/-; ರೂ. ೬,೦೦೦/- ಮತ್ತು ರೂ. ೪,೦೦೦/-ಗಳ ನಗದು ಬಹುಮಾನಗಳನ್ನು ನೀಡಲಾಯಿತು.



**ಅಕಾಡೆಮಿಯ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮ**

**5. ರಾಷ್ಟ್ರೀಯ ವಿಜ್ಞಾನ ದಿನಾಚರಣೆ**

ಇಂದಿನ ಜ್ಞಾನಾಧಾರಿತ ಸಮಾಜದಲ್ಲಿ ವಿಜ್ಞಾನದ ಮಹತ್ವದ ಬಗ್ಗೆ ಸಂದೇಶವನ್ನು ವಿದ್ಯಾರ್ಥಿಗಳಲ್ಲಿ ಮತ್ತು ಜನಸಾಮಾನ್ಯರಲ್ಲಿ ಹರಡಲು ಅನುವಾಗುವಂತೆ ಹಾಗೂ ರಾಷ್ಟ್ರದ ಶ್ರೇಷ್ಠ ಭೌತ ವಿಜ್ಞಾನಿ ಸರ್ ಸಿ. ವಿ. ರಾಮನ್‌ರವರ ಮಹತ್ವಪೂರ್ಣ ಸಂಶೋಧನೆ ರಾಮನ್ ಪರಿಣಾಮವನ್ನು ವಿಶ್ವಕ್ಕೆ ಅನಾವರಣಗೊಳಿಸಿದ ದಿನದ ಸ್ಮರಣಾರ್ಥ ಫೆಬ್ರವರಿ 28ರಂದು ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಆಚರಿಸಲಾಯಿತು. ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ **"ಭಾರತದಲ್ಲಿ ಉತ್ಪಾದನೆ; ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೇರಿತ ಸಂಶೋಧನೆಗಳು" (Make in India: Science and Technology Driven Innovation)** ಎಂಬ ಕೇಂದ್ರ ವಿಷಯದಡಿ ಪ್ರಥಮ ದರ್ಜೆ ವಿಜ್ಞಾನ ಕಾಲೇಜುಗಳ ಸಹಯೋಗದೊಂದಿಗೆ 2016ರ ಫೆಬ್ರವರಿ – ಮಾರ್ಚ್ ಅವಧಿಯಲ್ಲಿ ಆಯೋಜಿಸಲಾಯಿತು.



ರಾಷ್ಟ್ರೀಯ ವಿಜ್ಞಾನ ದಿನಾಚರಣೆ 2016ರ ಕಾರ್ಯಕ್ರಮ

**6. ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಸಮ್ಮೇಳನಗಳು**

**6.1 ಅಕಾಡೆಮಿಯ ಪ್ರಧಾನ ಸಮ್ಮೇಳನ**

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಎಂಟನೇ ವಾರ್ಷಿಕ ಸಮ್ಮೇಳನವನ್ನು "**ಹೊಸ ಪರಂಪರೆಯ ನಗರ ಪ್ರದೇಶಾಭಿವೃದ್ಧಿಗೆ ವಿಜ್ಞಾನ ಮತ್ತು ತಂತ್ರಜ್ಞಾನ**" (Science & Technology for GenNext Urban Space) ಎಂಬ ಕೇಂದ್ರ ವಿಷಯದಡಿ, ಬೆಂಗಳೂರಿನ ವಿ. ವಿ. ಪುರಂನಲ್ಲಿರುವ

ಬೆಂಗಳೂರು ತಾಂತ್ರಿಕ ಮಹಾವಿದ್ಯಾಲಯದ (BIT) ಸಹಯೋಗದೊಂದಿಗೆ ಎರಡು ದಿನಗಳ ಕಾಲ 2015ರ ನವೆಂಬರ್ 5 ಮತ್ತು 6 ರಂದು ಬಹಳ ಯಶಸ್ವಿಯಾಗಿ ಆಯೋಜಿಸಲಾಯಿತು.

ಈ ಸಮ್ಮೇಳನವನ್ನು ದಿನಾಂಕ 5ನೇ ನವೆಂಬರ್ 2015 ರಂದು ಬೆಳಗ್ಗೆ ಬೆಂಗಳೂರಿನ ತಾಂತ್ರಿಕ ಮಹಾವಿದ್ಯಾಲಯದ (BIT) ಆವರಣದಲ್ಲಿರುವ ಕುವೆಂಪು ಕಲಾಕ್ಷೇತ್ರದಲ್ಲಿ ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಗಳಾದ **ಶ್ರೀ ಸಿದ್ಧರಾಮಯ್ಯ** ಅವರು ಉದ್ಘಾಟಿಸಿ, ಚಾಲನೆ ನೀಡಿದರು. ಉದ್ಘಾಟನಾ ಸಮಾರಂಭದಲ್ಲಿ ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ **ಶ್ರೀ ಎಸ್. ಆರ್. ಪಾಟೀಲ್** ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಅಕಾಡೆಮಿಯ ಅಧ್ಯಕ್ಷರು & ಇಸ್ರೋ ಸಂಸ್ಥೆಯ ನಿವೃತ್ತ ಅಧ್ಯಕ್ಷರಾದ **ಪ್ರೊ. ಯು. ಆರ್. ರಾವ್** ಅವರು ಪ್ರಧಾನ ಭಾಷಣ ಮಾಡಿದರು. ಸಮಾರಂಭದ ಅಧ್ಯಕ್ಷತೆಯನ್ನು ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷರಾದ **ಡಾ. ಅಪ್ಪಾಜಿಗೌಡ** ಅವರು ವಹಿಸಿದ್ದರು.

ಈ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ದೇಶದ ಬಾಹ್ಯಾಕಾಶ ಸಂಶೋಧನಾ ಕ್ಷೇತ್ರಕ್ಕೆ ಅನನ್ಯ ಕೊಡುಗೆಯನ್ನು ನೀಡಿರುವ ಖ್ಯಾತ ಬಾಹ್ಯಾಕಾಶ ವಿಜ್ಞಾನಿ **ಪದ್ಮಭೂಷಣ ಡಾ. ಬಿ. ಎನ್. ಸುರೇಶ್,** ಡಾ. ವಿಕ್ರಂ ಸಾರಾಭಾಯಿ ಡಿಸ್ಟಿಂಗ್ವಿಷ್ಡ್ ಪ್ರೊಫೆಸರ್ /ನಿವೃತ್ತ ನಿರ್ದೇಶಕರು, ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸ್ಪೇಸ್ ಸೈನ್ಸ್ & ಟೆಕ್ನಾಲಜಿ (IIST) ಅವರಿಗೆ "**ಅಕಾಡೆಮಿ ಜೀವಮಾನ ಸಾಧನೆ**" ಪ್ರಶಸ್ತಿಯನ್ನು ನೀಡಿ ಪುರಸ್ಕರಿಸಲಾಯಿತು. ಸನ್ಮಾನಿತರಿಗೆ ರೂ. 1.00 ಲಕ್ಷಗಳ ನಗದು, ಚಿನ್ನದ ಪದಕ ಹಾಗೂ ಸನ್ಮಾನ ಪತ್ರಗಳನ್ನು ನೀಡಿ ಗೌರವಿಸಲಾಯಿತು.

ಸಮ್ಮೇಳನದ ತಾಂತ್ರಿಕ ಅಧಿವೇಶನದಲ್ಲಿ ಖ್ಯಾತ ವಿಜ್ಞಾನಿಗಳಿಂದ ಮತ್ತು ಸಂಶೋಧಕರಿಂದ ಹತ್ತು ಶ್ರೇಷ್ಠ ಉಪನ್ಯಾಸಗಳನ್ನು ಏರ್ಪಡಿಸಲಾಗಿತ್ತು. ದಿನಾಂಕ 5ನೇ ನವೆಂಬರ್ 2015ರ ಸಂಜೆ 6 ಗಂಟೆಗೆ ಪ್ರಸಿದ್ಧ ಬಾಹ್ಯಾಕಾಶ ವಿಜ್ಞಾನಿ ಪ್ರೊ. ಯು. ಆರ್. ರಾವ್, ನಿವೃತ್ತ ಅಧ್ಯಕ್ಷರು, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇವರು "**ಭಾರತೀಯ ಬಾಹ್ಯಾಕಾಶ ಕಾರ್ಯಕ್ರಮ: ಹಿಂದು, ಇಂದು ಮತ್ತು ಮುಂದು**" ಎಂಬ ವಿಷಯದ ಮೇಲೆ ಸಾರ್ವಜನಿಕ ಉಪನ್ಯಾಸವನ್ನು ನೀಡಿದರು.

ಮೂಲ ಮತ್ತು ಅನ್ವಯಿಕ ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದ 190ಕ್ಕೂ ಹೆಚ್ಚು ಸಂಶೋಧನಾ ಪ್ರಾತ್ಯಕ್ಷಿಕೆಗಳನ್ನು (Poster Presentation) ರಾಜ್ಯದ ವಿವಿಧೆಡೆಗಳಿಂದ ಬಂದ ಸ್ನಾತಕೋತ್ತರ/ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಮತ್ತ ವಿಜ್ಞಾನಿಗಳು ಪ್ರಾತ್ಯಕ್ಷಿಕೆಗಳ ಪ್ರದರ್ಶನದಲ್ಲಿ ಮಂಡಿಸಿದರು. ಯುವ ಸಂಶೋಧಕರಿಗೆ ಅವಕಾಶವನ್ನು ಕಲ್ಪಿಸಲಾಗಿತ್ತು. ಈ ಪ್ರಾತ್ಯಕ್ಷಿಕೆಗಳನ್ನು ತಜ್ಞ ಸಮಿತಿಯು ಮೌಲ್ಯಮಾಪನ ಮಾಡಿ, ಭೌತ & ಗಣಿತ ವಿಜ್ಞಾನ; ರಸಾಯನ & ಜೀವ ವಿಜ್ಞಾನ; ಅಂತರ್ ಶಾಸ್ತ್ರೀಯ ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಜ್ಞಾನಗಳ ಅತ್ಯುತ್ತಮವಾದ ಪ್ರಾತ್ಯಕ್ಷಿಕೆಗಳನ್ನು ನಗದು ಬಹುಮಾನಕ್ಕೆ ಆಯ್ಕೆ ಮಾಡಿತು. ಪ್ರತಿ ವಿಷಯದಲ್ಲೂ ಎರಡು ಬಹುಮಾನಗಳನ್ನು ನೀಡಲಾಯಿತು (ಮೊದಲನೇ ಬಹುಮಾನ ರೂ. 10,000/- ಹಾಗೂ ಎರಡನೇ ಬಹುಮಾನ ರೂ. 5.000/-ಗಳು). ವಿಶ್ವವಿದ್ಯಾಲಯಗಳ ಮತ್ತು ಕಾಲೇಜುಗಳ ಪ್ರಾಧ್ಯಾಪಕರು, ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು, ವಿಜ್ಞಾನ ಬರಹಗಾರರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸರ್ಕಾರದ ಸ್ವಾಯತ್ತ ಸಂಸ್ಥೆಗಳ ಪ್ರತಿನಿಧಿಗಳು ಸೇರಿದಂತೆ, ಒಟ್ಟು ಸುಮಾರು 1190 ಪ್ರತಿನಿಧಿಗಳು ಸಮ್ಮೇಳನದಲ್ಲಿ ಭಾಗವಹಿಸಿದ್ದರು.




ಬೆಂಗಳೂರಿನ ಬಿ.ಐ.ಟಿ. ಕಾಲೇಜಿನಲ್ಲಿ ನಡೆದ ಅಕಾಡೆಮಿಯ 8ನೇ ವಾರ್ಷಿಕ ಸಮ್ಮೇಳನದ ಉದ್ಘಾಟನಾ ಸಮಾರಂಭ

**6.2 ಕಲಬುರ್ಗಿಯಲ್ಲಿ ಅಕಾಡೆಮಿ ಸಮ್ಮೇಳನ:**

ಪ್ರಸಕ್ತ ಆರ್ಥಿಕ ವರ್ಷದಲ್ಲಿ ಅಕಾಡೆಮಿಯ ಎರಡನೇ ಸಮ್ಮೇಳನವನ್ನು **"ಇಂಧನ, ಹವಾಮಾನ ಬದಲಾವಣೆ ಮತ್ತು ಪರಿಸರ"** ಎಂಬ ವಿಷಯದ ಮೇಲೆ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ 2016 ಜನವರಿ 29-30ರಂದು ಕಲಬುರ್ಗಿಯ ಡಾ. ಎಸ್ ಎಮ್ ಪಂಡಿತ್ ರಂಗಮಂದಿರದಲ್ಲಿ ಆಯೋಜಿಸಲಾಯಿತು. ಈ ಸಮ್ಮೇಳನವನ್ನು ಅಕಾಡೆಮಿಯ ಮಾನ್ಯ ಸದಸ್ಯರು ಹಾಗೂ ಬೆಂಗಳೂರಿನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಎಮೆರಿಟಸ್ ಪ್ರೊಫೆಸರ್ ನಾಡೋಜ ಡಾ. ಪಿ. ಎಸ್. ಶಂಕರ್ ಅವರು ಉದ್ಘಾಟಿಸಿದರು. ಸಮಾರಂಭದ ಮುಖ್ಯ ಅತಿಥಿಗಳಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ವಿಶೇಷ ತಾಂತ್ರಿಕ ನಿರ್ದೇಶಕರಾದ ಡಾ. ಹೆಚ್. ಹೊನ್ನೇಗೌಡ ಅವರು ಭಾಗವಹಿಸಿದ್ದು, ಅಧ್ಯಕ್ಷತೆಯನ್ನು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಹೆಚ್. ಎಂ. ಮಹೇಶ್ವರಯ್ಯ ಅವರು ವಹಿಸಿದ್ದರು.

ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ಪ್ರಾಧ್ಯಾಪಕರುಗಳು, ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು, ವಿಜ್ಞಾನ ಬರಹಗಾರರು, ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸರ್ಕಾರಿ ಸ್ವಾಯತ್ತ ಸಂಸ್ಥೆಗಳ ಪ್ರತಿನಿಧಿಗಳನ್ನೊಳಗೊಂಡ 600ಕ್ಕೂ ಹೆಚ್ಚು ಪ್ರತಿನಿಧಿಗಳು ಸಮ್ಮೇಳನದಲ್ಲಿ ಭಾಗವಹಿಸಿದ್ದರು.

ಸಮ್ಮೇಳನದ ತಾಂತ್ರಿಕ ಅಧಿವೇಶನದಲ್ಲಿ ಖ್ಯಾತ ವಿಜ್ಞಾನಿಗಳು ಮತ್ತು ಸಂಶೋಧಕರು ಒಂಬತ್ತು ಶ್ರೇಷ್ಠ ಉಪನ್ಯಾಸಗಳನ್ನು ಇಂಧನ, ಹವಾಮಾನ ಬದಲಾವಣೆ ಮತ್ತು ಪರಿಸರಕ್ಕೆ ಸಂಬಂಧಿಸಿದ ವಿಷಯಗಳ ಮೇಲೆ ನೀಡಿದರು. ಹೆಸರಾಂತ ವಿಜ್ಞಾನಿ ಪ್ರೊ. ಟಿ. ವೆಂಕಟೇಶ್, ಪ್ರಧಾನ ಸಲಹೆಗಾರರು, ಭಾರತೀಯ ಗುಣಮಟ್ಟ ಪರಿಷತ್ (**Quality Council of India**) ಎಮೆರಿಟಸ್ ಪ್ರೊಫೆಸರ್, ಜೀವರಸಾಯನ ವಿಜ್ಞಾನ & ಜೀವಭೌತ ವಿಜ್ಞಾನ ವಿಭಾಗ, ಸೆಂಟ್ ಜಾನ್ಸ್ ಮೆಡಿಕಲ್ ಕಾಲೇಜು ಇವರು **"ವಿಷಕಾರಕ ರಾಸಾಯನಿಕಗಳು ಮತ್ತು ಸಮಾಜ"** (**Toxic Chemicals and Society**) ಎಂಬ ವಿಷಯದ ಮೇಲೆ ಸಾರ್ವಜನಿಕ ಉಪನ್ಯಾಸವನ್ನು ನೀಡಿದರು..

ಅಲ್ಲದೇ, ಮೂಲ ಮತ್ತು ಅನ್ವಯಿಕ ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದ ಸಂಶೋಧನಾ ಪ್ರಾತ್ಯಕ್ಷಿಕೆಗಳನ್ನು (Poster Presentation) ಮಂಡಿಸಲು ಅವಕಾಶವನ್ನು ಕಲ್ಪಿಸಲಾಗಿದ್ದು, ಭೌತ ಮತ್ತು ಗಣಿತ ವಿಜ್ಞಾನ; ರಸಾಯನ ಮತ್ತು ಜೀವ ವಿಜ್ಞಾನ; ಅಂತರ್ ಶಾಸ್ತ್ರೀಯ ವಿಜ್ಞಾನ ಮತ್ತು

ಇಂಜಿನಿಯರಿಂಗ್ ವಿಜ್ಞಾನ ವಿಷಯಗಳ ಪ್ರಾತ್ಯಕ್ಷಿಕೆಗಳನ್ನು ಮಂಡಿಸಲಾಯಿತು. ಶ್ರೇಷ್ಠತೆಗೆ ಉತ್ತೇಜನ ನೀಡಲು ತಜ್ಞ ಸಮಿತಿಯು ಆಯ್ಕೆ ಮಾಡಿದ ಪ್ರತಿ ವಿಷಯದ ತಲಾ ಮೂರು ಅತ್ಯುತ್ತಮ ಪ್ರಾತ್ಯಕ್ಷಿಕೆಗಳಿಗೆ ನಗದು ಬಹುಮಾನವನ್ನು ನೀಡಲಾಯಿತು (ಮೊದಲನೇ ಬಹುಮಾನ ರೂ. 5,000/- ; ಎರಡನೇ ಬಹುಮಾನ ರೂ. 3.000/- ಹಾಗೂ ವಿಶೇಷ ಬಹುಮಾನ ರೂ. 1,000/-).




ಕಲಬುರ್ಗಿಯಲ್ಲಿ ನಡೆದ ಅಕಾಡೆಮಿಯ ಸಮ್ಮೇಳನದ ಉದ್ಘಾಟನಾ ಸಮಾರಂಭ

**7. ವಿಜ್ಞಾನ ಪದವಿ ವಿದ್ಯಾರ್ಥಿಗಳಿಗೆ ಮುಕ್ತ ಉಪನ್ಯಾಸ ಮಾಲೆ ಕಾರ್ಯಕ್ರಮ**

ಮೂಲ ವಿಜ್ಞಾನ ಪದವಿ ವಿದ್ಯಾರ್ಥಿಗಳಿಗೆ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳ ಹೊಸ ಆಯಾಮಗಳಲ್ಲಿ ಉನ್ನತ ಶಿಕ್ಷಣ ಮತ್ತು ಸಂಶೋಧನೆಯನ್ನು ಕೈಗೊಳ್ಳಲು ಆಸಕ್ತಿ ಬೆಳೆಸಿ, ಉತ್ತೇಜಿಸಲು ರಾಜ್ಯದ ಖ್ಯಾತ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಗಳ ಶ್ರೇಷ್ಠ ವಿಜ್ಞಾನಿಗಳು ಮತ್ತು ಹೆಸರಾಂತ ತಜ್ಞರನ್ನು ಆಹ್ವಾನಿಸಿ ಉಪನ್ಯಾಸಗಳನ್ನು ಏರ್ಪಡಿಸಲಾಯಿತು. ಒಟ್ಟು 6 ಮುಕ್ತ ಉಪನ್ಯಾಸ ಮಾಲೆ ಕಾರ್ಯಕ್ರಮಗಳನ್ನು ರಾಜ್ಯದ ವಿವಿಧೆಡೆ ವಿಜ್ಞಾನ ಪದವಿ ಕಾಲೇಜು ಮತ್ತು ವಿಜ್ಞಾನ ಕೇಂದ್ರಗಳ ಸಹಯೋಗದೊಂದಿಗೆ ಯಶಸ್ವಿಯಾಗಿ ಆಯೋಜಿಸಲಾಗಿದ್ದು, ಅವುಗಳೆಂದರೆ ಕಾರವಾರ (ಉತ್ತರ ಕನ್ನಡ ಜಿಲ್ಲಾ ವಿಜ್ಞಾನ ಕೇಂದ್ರ, ಕಾರವಾರ); ಕೋಲಾರ (ಕರ್ನಾಟಕ ಅಸೋಸಿಯೇಷನ್ ಫಾರ್ ಅಡ್ವಾನ್ಸ್‌ಮೆಂಟ್ ಆಫ್ ಸೈನ್ಸ್ - KAAS); ದಾವಣಗೆರೆ (ಬಾಪೂಜಿ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ – BIET); ಹಾಸನ (ಎವಿಕೆ ಕಾಲೇಜು); ಜಮಖಂಡಿ, ಬಾಗಲಕೋಟೆ ಜಿಲ್ಲೆ (ಬಿ. ಎಲ್. ಡಿ. ಇ. ಟಿ. ಜಿ. ಪಿ. ಸೈನ್ಸ್ ಕಾಲೇಜು) ಮತ್ತು ಮುದ್ದೇಬಿಹಾಳ, ವಿಜಯಪುರ ಜಿಲ್ಲೆ (ಎಂ. ಜಿ. ವಿ. ಸಿ.ಸೈನ್ಸ್ ಕಾಲೇಜು).






ವಿಜ್ಞಾನ ಪದವಿ ವಿದ್ಯಾರ್ಥಿಗಳಿಗೆ ಅಕಾಡೆಮಿಯ ಮುಕ್ತ ಉಪನ್ಯಾಸ ಮಾಲೆ ಕಾರ್ಯಕ್ರಮ

## ೮.೦ ಅಲ್ಪ ಮೊತ್ತದ ಅನುದಾನ

ವಿದ್ಯಾರ್ಥಿಗಳಲ್ಲಿ ಮತ್ತು ಜನಸಾಮಾನ್ಯರಲ್ಲಿ ವೈಜ್ಞಾನಿಕ ಅರಿವು ಮೂಡಿಸುವ ಮತ್ತು ವಿಜ್ಞಾನವನ್ನು ಜನಪ್ರಿಯಗೊಳಿಸುವ ಪ್ರಾಮುಖ್ಯತೆಯನ್ನು ಮನಗೊಂಡು, ಅಕಾಡೆಮಿಯು ವಿಜ್ಞಾನ ಪ್ರೋತ್ಸಾಹಕ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ಆಯೋಜಿಸಲು ಉತ್ತೇಜಿಸುತ್ತಿದೆ. ರಾಜ್ಯ ವಿವಿಧ ಭಾಗಗಳ ಶೈಕ್ಷಣಿಕ ಸಂಸ್ಥೆಗಳು, ವಿಶ್ವವಿದ್ಯಾನಿಲಯಗಳು, ವಿಜ್ಞಾನ ಪ್ರೋತ್ಸಾಹಕರು ಹಾಗೂ ಇತರೆ ಸಂಘ ಸಂಸ್ಥೆಗಳು ಸಲ್ಲಿಸಿದ್ದ ಪ್ರಸ್ತಾವನೆಗಳನ್ನು ಪ್ರೊ. ಕೆ. ಎಂ. ಕಾವೇರಿಯಪ್ಪ, ವಿಶ್ರಾಂತ ಕುಲಪತಿಗಳು, ಮಂಗಳೂರು ವಿಶ್ವವಿದ್ಯಾನಿಲಯ ಇವರ ಅಧ್ಯಕ್ಷತೆಯ ಉಪಸಮಿತಿಯು ಮೌಲ್ಯ ಮಾಪನ ಮಾಡಿ ಶಿಫಾರಸ್ಸು ಮಾಡಿದ ೪೦ ಪ್ರಸ್ತಾವನೆಗಳಿಗೆ ಗರಿಷ್ಠ ರೂ. ೫೦,೦೦೦/-ಗಳ ವರೆಗೆ ಅನುದಾನವನ್ನು ನೀಡಲಾಗಿದೆ.

## ೯.೦ ಶಿಕ್ಷಕರ ಪುನಶ್ಚೇತನಾ ಕಾರ್ಯಾಗಾರ

ವಿಜ್ಞಾನ ಶಿಕ್ಷಣದ ಗುಣಮಟ್ಟವನ್ನು ಉತ್ತಮಪಡಿಸುವ ಉದ್ದೇಶದಿಂದ ಪ್ರೌಢಶಾಲಾ ವಿಜ್ಞಾನ ಶಿಕ್ಷಕರುಗಳಿಗೆ ಹೆಸರಾಂತ ಸಂಪನ್ಮೂಲ ತಜ್ಞರಿಂದ ತರಬೇತಿಯನ್ನು ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಶಿಕ್ಷಕರ ತರಬೇತಿ ಕಾರ್ಯಾಗಾರಗಳನ್ನು ವಿಜ್ಞಾನ ಮತ್ತು ಗಣಿತ ವಿಷಯಗಳಲ್ಲಿ ಮೂರು ಸಂಸ್ಥೆಗಳಾದ: (1) ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್, ಹೆಚ್.ಡಿ. ಕೋಟೆ, ಮೈಸೂರು; (2) ವಿವೇಕಾನಂದ ಗಿರಿಜನ ಕಲ್ಯಾಣ ಕೇಂದ್ರ, ಬಿಳಿಗಿರಿರಂಗನ ಬೆಟ್ಟ ಮತ್ತು (3) ಶ್ರೀ ಗುರುಕೃಪ ಪ್ರೌಢಶಾಲೆ, ಗಿರಿಯಾಪುರ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವುಗಳ ಸಹಯೋಗದೊಂದಿಗೆ ಯಶಸ್ವಿಯಾಗಿ ಆಯೋಜಿಸಲಾಯಿತು.



ಪ್ರೌಢಶಾಲಾ ವಿಜ್ಞಾನ ಶಿಕ್ಷಕರುಗಳಿಗೆ ಪುನಶ್ಚೇತನಾ ಕಾರ್ಯಾಗಾರ

## ೧೦.೦ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಗೆ ವಿಜ್ಞಾನ ವಿಷಯದ ವಿವರಣಾತ್ಮಕ ಕಿರು ಪುಸ್ತಕಗಳ ಪ್ರಕಟಣೆ

ಶಾಲಾ ಪಠ್ಯಕ್ರಮಕ್ಕೆ ಪೂರಕವಾಗುವಂತೆ ೫ ರಿಂದ ೧೦ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ವಿಜ್ಞಾನ ಮತ್ತು ತಂತ್ರಜ್ಞಾನದ ಇತ್ತೀಚಿನ ಬೆಳವಣಿಗೆಗೆ ಸಂಬಂಧಿಸಿದ ಕಿರು ಪುಸ್ತಕಗಳನ್ನು ಕನ್ನಡದಲ್ಲಿ ಪ್ರಕಟಿಸಲಾಗುವುದು (ಉದಾ. ಉಪಗ್ರಹಗಳು, ಜಾಗತಿಕ

ತಾಪಮಾನ ಇತ್ಯಾದಿ). ಈ ಕಾರ್ಯಕ್ರಮದ ಮುಖ್ಯ ಉದ್ದೇಶವು ವಿದ್ಯಾರ್ಥಿಗಳಲ್ಲಿ ವಿಷಯ ಗ್ರಹಿಕೆಯನ್ನು ಹೆಚ್ಚಿಸಲು ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನದ ಕಲಿಕೆಯಲ್ಲಿ ಆಸಕ್ತಿ ಮೂಡಿಸಲು ಅನುವಾಗುವಂತೆ ಆಕರ್ಷಕವಾದ 16 ರಿಂದ 32 ಪುಟಗಳ ವಿವರಣಾತ್ಮಕ ಮತ್ತು ವರ್ಣರಂಜಿತ ಚಿತ್ರಗಳೊಂದಿಗೆ ಸರಳ ಭಾಷೆಯ ವಿವರಣೆಗಳನ್ನೊಳಗೊಂಡ ಕಿರು ಪುಸ್ತಕಗಳನ್ನು ಪ್ರಕಟಿಸುವುದಾಗಿದೆ.

## ಸಂಪರ್ಕಿಸಬೇಕಾದ ವಿಳಾಸ:


**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಸದಸ್ಯ ಕಾರ್ಯದರ್ಶಿ**

**ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ**

**'ವಿಜ್ಞಾನ ಭವನ' 24/2, 21ನೇ ಮುಖ್ಯ ರಸ್ತೆ, ಬನಶಂಕರಿ, 2ನೇ ಹಂತ, ಬೆಂಗಳೂರು**

**ಫೋನ್ : 080-26711160/ ಫ್ಯಾಕ್ಸ್ : 080-26712789**

**ಇಮೇಲ್** : ksta.gok@gmail.com